4166 (4927) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕೋಲಾರ ಜಿಲ್ಲೆಯ ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಕೊಳವೆ ಬಾವಿಗಳ ಸಂಖ್ಯೆ ಅಧಿಕವಾಗಿರುವುದರಿಂದ ವಿದ್ಯುತ್ ಸಬ್-ಸ್ಟೇಷನ್‌ಗಳ (ಹೆಚ್ಚುವರಿ) ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕಡಿಮೆ ವೋಲ್ಟೇಜಿನಿಂದಾಗಿ ಕೊಳವೆ ಬಾವಿಗಳು ಸರಿಯಾಗಿ ಕಾರ್ಯ ನಿರ್ವಹಿಸದೆ ಇರುವುದರಿಂದ ರೈತರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಚಿಕ್ಕಬಳ್ಳಾಪುರ ತಾಲ್ಲೂಕಿನ ಜಾತವಾರ ಅಥವಾ ಕೊಂಡೇನಹಳ್ಳಿ ಪ್ರದೇಶದಲ್ಲಿ ಹೆಚ್ಚುವರಿ ವಿದ್ಯುತ್ ಪಂಪು ಸ್ಟೇಷನ್ ನಿರ್ಮಾಣ ಮಾಡಲು ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಗಮನಹರಿಸಿ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಹೌದು

ಆ) ಹೌದು

ಇ) ಚಿಕ್ಕಬಳ್ಳಾಪುರ ತಾಲ್ಲೂಕಿನ ಜಾತವಾರ ಅಥವಾ ಕೊಂಡೇನಹಳ್ಳಿ ಪ್ರದೇಶಗಳ ಸಮೀಪವಿರುವ ರಾಮಗುಡಿಯಲ್ಲಿ ಒಂದು 66/11 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್ ಸ್ಥಾಪಿಸುವ ಪ್ರಸ್ತಾವನೆ ಬಗ್ಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಅಧ್ಯಯನ ನಡೆಸುತ್ತಿದೆ. ಈ ತಾಲ್ಲೂಕಿನ ನೆಲ್ಲಿಮಾರನಹಳ್ಳಿ ಮತ್ತು ಮುದ್ದೇನಹಳ್ಳಿಗಳಲ್ಲಿ ತಲಾ ಒಂದೊಂದು 66/11 ಕೆ.ವಿ. ಹೊಸ ವಿದ್ಯುತ್ ಸಬ್-ಸ್ಟೇಷನ್ನುಗಳನ್ನು ಸ್ಥಾಪಿಸಲು ಉದ್ದೇಶಿಸಿದೆ.

4167 (4973) ಶ್ರೀ ನಾಗಮಣಿ ಎಂ.ಕೆ (ಕಿರುಗಾವಲು) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಮಂಡ್ಯ ಜಿಲ್ಲೆಯಲ್ಲಿ ಕುಡಿಯುವ ನೀರಿನ ಮತ್ತು ರೈತರ ಐ.ಪಿ. ಸೆಟ್ಟುಗಳಿಗೆ ಟಿ.ಸಿ.ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ, ಅವುಗಳ ಸಂಖ್ಯೆ ಎಷ್ಟು? (ಕ್ಷೇತ್ರವಾರು ವಿವರ ನೀಡುವುದು)

ಇ) ಸರ್ಕಾರ ಇದರ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

ಈ) ಎಷ್ಟು ದಿನಗಳಲ್ಲಿ ಇದನ್ನು ಪೂರೈಸಲಾಗುವುದು?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿಯ ವ್ಯಾಪ್ತಿಯಲ್ಲಿರುವ ಮಂಡ್ಯ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸ್ಥಾವರಗಳಿಗೆ ಆದ್ಯತೆ ಮೇರೆಗೆ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಒದಗಿಸಲಾಗುತ್ತಿದೆ.

ರೈತರ ನೀರಾವರಿ ಪಂಪುಸೆಟ್ಟುಗಳ ಸ್ಥಾವರಗಳಿಗೆ ಟ್ರಾನ್ಸ್‌ಫಾರ್ಮರ್‌ಗಳ ಅಳವಡಿಕೆಯು ನಿರಂತರವಾಗಿ ನಡೆಯುವ ಪ್ರಕ್ರಿಯೆಯಾಗಿರುತ್ತದೆ. ಪ್ರಸ್ತುತ ಮಂಡ್ಯ ಜಿಲ್ಲೆಯಲ್ಲಿ ನೀರಾವರಿ ಪಂಪುಸೆಟ್ಟು ಸ್ಥಾವರಗಳಿಗೆ ಅಳವಡಿಸಲು 52 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪ್ರಸ್ತುತ ಮಂಡ್ಯ ಜಿಲ್ಲೆಯಲ್ಲಿ ನೀರಾವರಿ ಪಂಪುಸೆಟ್ಟುಗಳ ಸ್ಥಾವರಗಳಿಗೆ ಅಳವಡಿಸಲು ಅಗತ್ಯವಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ವಿಧಾನಸಭಾ ಕ್ಷೇತ್ರವಾರು ವಿವರ ಕೆಳಕಂಡಂತಿದೆ.

| ಕ್ರಮ ಸಂಖ್ಯೆ | ವಿಧಾನಸಭಾ ಕ್ಷೇತ್ರದ ಹೆಸರು | ಅಗತ್ಯವಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ |
|---|---|---|
| 1 | ಪಾಂಡಪುರ | 10 |
| 2 | ಕೆ.ಆರ್.ಪೇಟೆ | 10 |
| 3 | ನಾಗಮಂಗಲ | 6 |
| 4 | ಶ್ರೀರಂಗಪಟ್ಟಣ | 7 |
| 5 | ಮಂಡ್ಯ | 2 |
| 6 | ಕೆರಗೋಡು | 2 |
| 7 | ಮದ್ದೂರು | 5 |
| 8 | ಮಳವಳ್ಳಿ | 6 |
| 9 | ಕಿರುಗಾವಲು | 4 |
| | **ಒಟ್ಟು** | **52** |

ಇ) ಮತ್ತು ಈ)

ಕುಡಿಯುವ ನೀರಿನ ಸ್ಥಾವರಗಳಿಗೆ ಹಾಗೂ ರೈತರ ನೀರಾವರಿ ಪಂಪುಸೆಟ್ಟುಗಳ ಸ್ಥಾವರಗಳಿಗೆ ವಿದ್ಯುತ್ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಒದಗಿಸುವ ಪ್ರಕ್ರಿಯೆಯು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಸಂಪನ್ಮೂಲಗಳ ಲಭ್ಯತೆಗೆ ಒಳಪಟ್ಟು ನಿರಂತರವಾಗಿ ನಡೆಯುತ್ತಿದೆ. ನೀರಾವರಿ ಪಂಪುಸೆಟ್ಟುಗಳಿಗೆ ಬೇಕಾಗಿರುವ 52 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಹಂತಹಂತವಾಗಿ ಒದಗಿಸಲು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮವು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

4503 ಶ್ರೀ ಪಾಟೀಲ್ ಡಿ.ಆರ್. (ಗದಗ್) : ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕಳೆದ ಐದು ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾರಂಭವಾಗಿರುವ ಒಟ್ಟು ಉದ್ಯಮ ಎಷ್ಟು;